# ದುಡ್ಡು ದುಡ್ಡು

ಕೂತು ನಾಲ್ಕು ಸಾರಿ ಕೂಡಿ ಕಳೆದರೂ ಈ ಕ್ರೆಡಿಟ್ಟು ಕಾರ್ಡನ ಬ್ಯಾಲನ್ಸಿನ ಲೆಕ್ಕ ಸರಿ ಹೋಗುತ್ತಿರಲಿಲ್ಲ, ತಲೆ ಕೆರೆದುಕೊಂಡು ಮತ್ತೆ ತಿರುವಿ ಹಾಕುತ್ತಿದ್ದೆ, "ಮುನ್ನೂರು ಮೂವತ್ತು, ಐನೂರು ಹತ್ತು" ಅಂತಿರುವಾಗಲೇ, ಇವಳು ಕೂಗಿದಳು "ರೀ ಪೇಪರ್ ಬಿಲ್ಲಿನವ ಬಂದಿದ್ದ", "ಓಹೋ ಹಾಗೋ ಪೇಪರ್ ಸರಿಯಾಗಿ ಬರ್ತಿದೆ ಅಂತ ಹೇಳಬೇಕಿತ್ತು" ಅಂದೆ, "ಪೇಪರ್ ಸರಿಯಾಗೇ ಬರ್ತಿದೆ ಈಗ ಅವನಿಗೆ ಹಸಿರು ಹಸಿರು ಪೇಪರ್ ನೋಟು ಎಣಿಸಿ ಕೊಡಬೇಕಲ್ಲ" ಅಂದ್ಲು, "ಆಯ್ತು, ಅದೊಂದು ನೂರು ಅಂತ ಲೆಕ್ಕ ಮಾಡಿದೆ, ಲೇ ಪೇಪರ್ ಬೇಕೇನೆ ನಮ್ಗೆ, ನೀನ್ ಓದ್ತೀಯಾ" ಅಂದೆ, "ಅದೇ ಟೈಮ್ ಸಿಕ್ಕಾಗ ಮೇನ್ ಪೇಜ ಕಣ್ಣಾಡಿಸ್ತೀನಿ ಅಷ್ಟೇ, ಇಲ್ಲಾಂದ್ರೆ ಅದೂ ಇಲ್ಲ" ಅಂದ್ಲು. "ಓಕೇ ಹಾಗಾದ್ರೆ ಬರೀ ಮೇನ್ ಪೇಜ ಕೊಡ್ತಾರಾ ಕೇಳು, ಎನಾದ್ರೂ ಡಿಸ್ಕೌಂಟ್ ಸಿಕ್ರೆ ಒಳ್ಳೆದಾಗತ್ತೆ ದುಡ್ಡು ಉಳಿಯತ್ತೆ" ಅಂದೆ. ಪೇಪರನವ ಆ ಪ್ರಶ್ನೆ ಕೇಳಿದರೆ ಹೇಗೆ ಮುಖ ಮಾಡಬಹುದಿತ್ತೊ ಹಾಗೆ ಇವಳೇ ಮಾಡಿದ್ಲು. ಸಾಫ್ಟವೇರ ಕಂಪನಿಗಳಲ್ಲಿ ರಿಸೆಷನ ಅಂತ ಟಾಯ್ಲೆಟ್ಟಿನಲ್ಲಿಡುವ ಟಿಶ್ಯೂ ಪೇಪರ್ ಕೂಡ ಕಟ್ ಮಾಡಿದಂತೆ, ನಮ್ಮನೇ ಪೇಪರ ಮೇಲೆ ಕಣ್ಣು ಬಿದ್ದಿತ್ತು ನಂದು. "ವಾರದ ನಂತರ ಪಕ್ಕದ ಮನೆ ಪದ್ದು ಹೋಗಿ ಹೇಗೂ ರದ್ದಿ ಅಂಗಡಿಗೆ ಹಾಕ್ತಾಳೆ, ಅದನ್ನೇ ನಮ್ಮನೆಗೆ ಕೊಡು ಅಂತ ಹೇಳಿದರಾಯ್ತು ಬಿಡಿ" ಅಂದ್ಲು, ವಾರದ್ದೆಲ್ಲ ಸುದ್ದಿ ಒಮ್ಮೇ ಓದುವ ಯೋಚನೆ ಅವಳದು, ನಾನೇ ಚಾಪೆ ಕೆಳಗೆ ನುಗ್ಗಿದರೆ ರಂಗೋಲಿ ಕೆಳಗೆ ನುಸುಳುವವಳು. "ಒಳ್ಳೆ ಐಡಿಯಾ ಕೊಡ್ತೀಯಾ, ನೀನ ಯಾವುದಾದ್ರೂ ಕಂಪನಿಗೆ ಕನ್ಸಲ್ಟಂಟ ಅಂತ ಆಗಬಹುದಿತ್ತು" ಅಂದ್ರೆ, "ಕೊಡ್ತೀ ನನ್ನ ಕನ್ಸಲ್ಟಿಂಗ ಫೀಜು" ಅಂದ್ಲು... ಅಯ್ಯೋ ದುಡ್ಡು ಉಳಿಸೊದು ಹೇಳೊಕೂ ದುಡ್ಡಾ ತಲೆ ಚಚ್ಚಿಕೊಂಡು ಮತ್ತೆ ಲೆಕ್ಕ ಮಾಡತೊಡಗಿದೆ...

ಅಂತೂ ಲೆಕ್ಕ ಸೇರಿಸಿ, ಇವಳು ಕೊಟ್ಟ ದಿನಸಿ ಪಟ್ಟಿ ಹಿಡಿದು ಹೊರ ಹೊರಟೆ, ಮನೆ ಮಾಲೀಕರು ಕಾಣಿಸಿದರು, "ಏನು ಬಹಳ ದಿನಾ ಆಯ್ತು ಕಾಣಿಸಿಲ್ಲ" ಅಂದ್ರು. ಹೀ ಅಂತ ಹಲ್ಲು ಕಿರಿದೆ, ತಾರೀಖು ಹತ್ತು ಆಗಿ ಹೋಯ್ತು ಇನ್ನೂ ಬಾಡಿಗೇನೇ ಕೊಟ್ಟಿಲ್ಲ ಅಂತ ಕೇಳ್ತಿದಾರೆ ಅಂತ ಅನ್ಕೊಂಡು, "ಎರಡು ಸಾರಿ ಬಂದಿದ್ದೆ ತಾವೇ ಸಿಕ್ಕಲಿಲ್ಲ" ಅಂತ ಸುಳ್ಳು ರೈಲು ಬಿಟ್ಟು ಸಾವಿರದ ಕಂತೆಗಳನ್ನು ಎಣಿಸಿ ಅವರ ಕೈಗಿಟ್ಟೆ "ಅಯ್ಯೊ ಪರವಾಗಿಲ್ಲ, ನೀವೇನು ಕೊಟ್ಟೇ ಕೊಡ್ತೀರಲ್ಲಾ, ಅರ್ಜೆಂಟೇನಿರಲಿಲ್ಲ" ಅಂದ್ರು, ಪಾಪ ಒಳ್ಳೇವರು(ಬಾಡಿಗೇನೇ ಕೇಳದಿದ್ರೆ ಇನ್ನೂ ಒಳ್ಳೇವರು!!), "ಏನ್ ಮಾಡೊದು ಸಾರ್, ನಾಲ್ಕು ದಿನ ಹೆಚ್ಚಿಗೆ ಇಟ್ಟರೂ ಬ್ಯಾಂಕಿನಲ್ಲಿ ಏನು ಬಡ್ಡಿನೂ ಬರಲ್ಲ ಬಿಡಿ" ಅಂದೆ ನಗುತ್ತ, "ಲೇಟಾಗಿ ಕೊಟ್ರೆ ನಾವೇನು ದಂಡ(ಫೈನ್) ಹಾಕಲ್ಲ ಅಲ್ವಾ" ಅಂತಂದು ನಡೆದರು. ಬಡ್ಡಿನೂ ದುಡ್ಡೇ, ದಂಡಾನೂ ದುಡ್ಡೇ ಅಂತ ಯೋಚಿಸುತ್ತ, ನಾ ಕಿರಾಣಿ(ದಿನಸಿ) ಅಂಗಡಿಗೆ ಬಂದರೆ ಎಂದಿನಂತೆ ಕೀರ್ತಿ(ಕೀರುತಿ, ಕಿರುಚುತಿ, ನಮ್ಮ ನಾಮಕರಣವೇ) ಕಿರುಚುತ್ತಿದ್ಲು. ನನ್ನ ನೋಡಿ ಒಮ್ಮೇಲೆ ಮುಖದ ಮೇಲೆ ಇಷ್ಟು ದೊಡ್ಡ ನಗು ಹೊತ್ತು, "ಏನ್ ನಮ್ಮ ಅಂಗಡಿಗೆ ಬರೋದೇ ಇಲ್ಲಾ ಸರ್, ಡಿಸ್ಕೌಂಟ ಸಿಗತ್ತೇ, ಆಫರ ಅಂತ ಶಾಪಿಂಗ ಮಾಲ್‌ಗೆ ಹೋಗ್ತೀರಾ, ಅಲ್ಲಿ ಎಲ್ಲ ಹಳೇ ಮಾಲು, ನಮ್ಮಲ್ಲಿ ಎಲ್ಲಾ ಫ್ರೆಷ್" ಅಂದ್ಲು, **"ಹಳೇದೊ ಹೊಸದೊ... ದುಡ್ಡು ಹಳೇದಾದ್ರೂ ಅದೇ ಬೆಲೆ, ಹೊಸದಿದ್ರೂ ಅದೇ ಬೆಲೆ"** ಅಂದೆ ಅವಳಿಗೆ ತಿಳೀತೊ ಇಲ್ವೊ, ದೊಡ್ಡ ತತ್ವಜ್ಞಾನಿಯಂತೆ ಕಂಡಿರಬೇಕು, ಕಕ್ಕಾಬಿಕ್ಕಿಯಾಗಿ ನೊಡುತ್ತಿದ್ದವಳಿಗೆ ದಿನಸಿ ಪಟ್ಟಿ ಕೊಟ್ಟು, ಆ ಫ್ರೆಷ್ ಸಾಮಾನುಗಳಿಗೆ, ಗರಿಗರಿ ಫ್ರೆಷ್ ನೋಟುಗಳನ್ನೇ ಎಣಿಸಿ ಕೊಟ್ಟೆ(ರಿಜರ್ವ ಬ್ಯಾಂಕಿನಲ್ಲಿ ಪ್ರಿಂಟ ಆಗಿ ನೇರ ನನ್ನ ಕೈಗೇ ಬಂದಿರುವಂತವು.) ಅತ್ತಿತ್ತ ತಿರುವಿ ನಾಲ್ಕು ಬಾರಿ ಪರೀಕ್ಷಿಸಿ ನೋಡಿ ತೆಗೆದುಕೊಂಡಳು, ಅವಳ ಎಣ್ಣೆ, ಹಿಟ್ಟು ಮೆತ್ತಿದ ಕೈಗಳಲ್ಲಿ ಅವೂ ಹಳೆಯದಾದವು, ಖೊಟಾ ನೋಟು ಏನಲ್ಲ ಬಿಡು, ಅಷ್ಟಕ್ಕೂ ಅದೂ ಕೂಡ ದುಡ್ಡೇ ಅಲ್ವೇ ಖೊಟಾ ಅಂತ ಗೊತ್ತಾಗೊವರೆಗೆ... ಅಂತನ್ನಬೇಕೆನಿಸಿದರೂ ಜಾಸ್ತಿ ಮಾತಾಡಿದರೆ ಎಲ್ಲಿ ನಾನೇ ಪ್ರಿಂಟ ಮಾಡಿ ತಂದಿರುವೆ ಅಂತಂದಾಳು ಅಲ್ಲಲ್ಲ ಕಿರುಚಿಯಾಳು ಅಂತ ಹೆದರಿ ಸುಮ್ಮನಾದೆ, ಗಲ್ಲಾ ಪೆಟ್ಟಿಗೆ ಎಲ್ಲ ಸಾರಿಸಿ ಸಪಾಟ ಮಾಡುವ ಹಾಗೆ ಬಳಿದು, ಎಣಿಸಿ ನಾಣ್ಯಗಳನ್ನೇ ಕೊಟ್ಟಳು, ನೋಟಿಲ್ಲ ಬರೀ ಚೇಂಜ ಇದೆ ಅನ್ನುತ್ತ, ಅದೂ ದುಡ್ಡೆ ಅಲ್ವೇ, ಅದನ್ನೇ ಜೇಬಿನಲ್ಲಿಳಿಸಿ ನಡೆದೆ.

ಮನೆಗೆ ಬರುತ್ತಿದ್ದಂತೆ, ಜೇಬಿನಲ್ಲಿ ನಾಣ್ಯಗಳು ನಾಟ್ಯವಾಡಿದಂತಾಗಿ, ಗೆಜ್ಜೆ ಘಲ್ಲು ಘಲ್ಲು ಅನ್ನೊ ಹಾಗೆ ಸದ್ದು ಬರುತ್ತಿದ್ದು ಕೇಳಿ, "ರೀ ಕೀರ್ತಿ ಕಿರಾಣಿ ಅಂಗಡೀಲಿ ದಿನಸಿ ತುಗೊಂಬಾ ಅಂದ್ರೆ ಜತೆಗೆ ಅವಳನ್ನೂ ಕರೆತಂದಿರೋ ಹಾಗಿದೆ, ಏನು ಗೆಜ್ಜೆ ಸದ್ದು ಅದು" ಅಂದ್ಲು, "ಹೂಂ ದಿನಸಿ ಕೊಂಡ್ರೆ ಜತೆಗೆ ಫ್ರೀ ಅಂತ ಕೊಟ್ರು ಕಿರುಚೋಕೆ" ಅಂದೆ, "ಏನ್ ಫ್ರೀನೊ ಏನೊ ಫ್ರೀ ಅಂತ ಹೇಳೋಕಷ್ಟೇ ಅದಕ್ಕೂ ದುಡ್ಡು ಸೇರಿಸಿಯೇ ಇಟ್ಟಿರ್ತಾರೆ ಬಿಡಿ" ಅಂದು, ಅವಳಿಗೇನು ದುಡ್ಡಿನ ಸದ್ದು ಗೊತ್ತಾಗಲ್ವೇ... ತನ್ನ ಉಳಿತಾಯದ ಕುಡಿಕೆ, ಅದೇ ಆ ಹಂದಿ ಮರಿ ಬಾಕ್ಸ್ ಹಿಡಿದು ಹೊರಬಂದ್ಲು, ಸೇವಿಂಗ್ಸ ಮಾಡೊಕೆ ಅಂತ ಚಿಕ್ಕ ಹಂದಿಮರಿ ಆಕಾರದ ಬಾಕ್ಸ ಇರ್ತವಲ್ಲ, ಅದು, ಜೇಬಿನಿಂದ ತೆಗೆದು ಎರಡು ನಾಣ್ಯ ಅದರ ಬೆನ್ನಿನಲ್ಲಿನ ಕಿಂಡಿಗೆ ತಳ್ಳಿದೆ, ಹಂದಿಮರಿ ಖುಷಿಯಾದಂತೆ ಕಂಡರೂ ಇವಳು ಕಾಣಲಿಲ್ಲ, ಜೇಬಿನಲ್ಲಿದ್ದ ಎಲ್ಲ ನಾಣ್ಯ ತೆಗೆದು ಅವಳ ಕೈಗಿತ್ತು... "ದುಡ್ಡು ದುಡ್ಡು ದುಡ್ಡು... ಸಾಕಾಗಿದೆ ಮುಂಜಾನೆಯಿಂದ ಬರೀ ಕೊಡೋದೆ ಆಯ್ತು" ಅಂತ ಬೇಜಾರಿನಲ್ಲಿ ಅಂದರೆ, ನಾನೇ ಕೊಟ್ಟ ನಾಣ್ಯಗಳಲ್ಲಿನದೊಂದು ರೂಪಾಯಿ ನನ್ನ ಕೈಗಿತ್ತಳು ಭಿಕ್ಷೆ ಹಾಕಿದಂತೆ! ಕೊಟ್ಟಿದ್ದು ಯಾಕೆ ಬೇಡ ಅನ್ನಲಿ ಅಂತ ಕಣ್ಣಿಗೊತ್ತಿ ಇಟ್ಕೊಂಡೆ.

"ಅಲ್ಲ ನಾನೂ ನೋಡ್ತಾ ಇದೀನಿ, ಏನ್ ದುಡ್ಡು ದುಡ್ಡು ಅಂತೀದೀರಾ, ಏನಾದ್ರೂ ತೊಂದ್ರೇನಾ" ಅಂದ್ಲು, "ದುಡ್ಡು ಇದ್ರೂ ತೊಂದ್ರೆ, ಇಲ್ಲದಿದ್ರೂ ತೊಂದ್ರೆ ಬಿಡು" ಅಂದೆ, "ಇದ್ರೆ ಏನ್ ತೊಂದ್ರೆಪ್ಪಾ, ಜಾಸ್ತಿ ಆಗಿದ್ರೆ ನಂಗೆ ಕೊಡಿ" ಅಂದ್ಲು, "ಜಾಸ್ತಿ ಆಗಿದ್ದು ಕೊಟ್ಟೆನಲ್ಲ ಆಗಲೇ ಆ ಹಂದಿಮರಿಗೆ ತಿನ್ನಿಸಿದೆ" ಅಂದೆ, "ಹತ್ತಿಪ್ಪತ್ತು ರೂಪಾಯಿ ಜಾಸ್ತೀನಾ ನಿಮ್ಗೆ" ಅಂದ್ಲು "ಲೇ ಅಷ್ಟಕ್ಕೇ ದಿನಾ ಪೂರ್ತಿ ದುಡೀತಾರೆ ಕೆಲವು ದಿನಗೂಲಿಗಳು, ಅದು ಜಾಸ್ತೀನೆ" ಅಂದೆ, "ಅವರ ಹತ್ರಾ ದುಡ್ಡು ಜಾಸ್ತಿ ಇದ್ರೆ ತೊಂದ್ರೆನೇ ಇರಲ್ಲ, ಹಾಗಾದ್ರೆ ದುಡ್ಡಿದ್ರೂ ತೊಂದ್ರೆ ಅಂತ ಹೇಗೆ ಹೇಳ್ತೀರಿ" ಅಂತ ಮರುಪ್ರಶ್ನಿಸಿದಳು. "ಅದೇ ದಿನಗೂಲಿಗೆ ಹತ್ತು ಕೋಟಿ ರೂಪಾಯಿ ಲಾಟರಿ ಹತ್ತಿದ್ರೆ, ಹರಿದು ತಿಂದು ಬಿಡ್ತಾರೆ ಅವನನ್ನ, ಆಗ ದುಡ್ಡಿದ್ರೂ ತೊಂದ್ರೆ ಅಲ್ವಾ" ಅಂತ ಸಮಜಾಯಿಸಿದೆ. "ಅದೂ ಸರಿಯೇ... ದುಡ್ಡು ಇಲ್ದೆ ಇದ್ರೆ ಮಾತ್ರ ತೊಂದ್ರೆ ತಪ್ಪಿದ್ದಲ್ಲ" ಅಂದ್ಲು. "ಹಾಗೆ ನೋಡಿದ್ರೆ ಅಪ್ಪ ಕಳಿಸಿದ ಪಾಕೆಟ ಮನಿಯಲ್ಲಿ ಕಾಲೇಜಿನಲ್ಲೇ ಆರಾಮಾಗಿದ್ದೆ" ಅಂತ ಮಾತು ತಿರುವಿದೆ, "ಈಗೇನು ದೊಡ್ಡ ತೊಂದ್ರೆ ಹಾಗಿದ್ರೆ" ಗುರಾಯಿಸಿದಳು. "ಅದೇ ಹಾಸ್ಟೆಲ್ಲು ಊಟ, ಹೊರಗೊಂದು ಕಪ್ಪು ಟೀ ಅಷ್ಟೇ ಚೆನ್ನಾಗೇ ಇತ್ತು, ತಿಂಗಳ ಕೊನೆಗೆ ಖಾಲಿ, ಕಾಲೇಜು ಮುಗೀತು ಕೆಲ್ಸ ಸಿಕ್ತು, ಪಾಕೇಟ ಮನಿಗಿಂತ ಜಾಸ್ತಿ ಸಂಬಳ ಆಯ್ತು, ರೂಮು, ಶಾಪಿಂಗು, ಫಿಲಮ್ಮು, ಆಯ್ತು. ತಿಂಗಳ ಕೊನೆಗೆ ಮತ್ತೆ ಖಾಲಿ. ಪ್ರಮೋಷನ್ನು ಆಯ್ತು ಇನಕ್ರೀಮೆಂಟ ಆಯ್ತು, ಬಸ್ಸು ಹೋಯ್ತು ಬೈಕ ಬಂತು, ಸುತ್ತಿ ಪೆಟ್ರೊಲು ಸುಟ್ಟಿದ್ದೇ ಆಯ್ತು, ದೊಡ್ಡ ರೂಮು, ಬ್ರಾಂಡ ಬಟ್ಟೆ ಮತ್ತೆ ತಿಂಗಳ ಕೊನೆಗೆ ಲೊಟ್ಟೆ, ಮತ್ತೆ ಹೆಚ್ಚಿನ ಸಂಬಳ, ಮದುವೆ ಮಹರಾಣಿಯಂತ ಮಡದಿ, ಅರಮನೆಯಂತ ಮನೆ... ತಿಂಗಳ ಕೊನೆ!!!" ನಿಟ್ಟುಸಿರು ಬಿಟ್ಟೆ.... "ಹೂಂ ಮಹರಾಜರು ಓಡಾಡೊಕೆ ರಥ ಅದೇ ಕಾರು ಬೇರೆ ಬೇಕು ಅದು ಮುಂದಿನ ಕಂತು, ಕೋಟಿ ರೂಪಾಯಿ ಸಿಕ್ರೂ ಸಾಕಾಗಲ್ಲ ಬಿಡಿ" ಅಂದ್ಲು. "ಒಂದಂತೂ ನಿಜ ಜೀವಿಸುವ ಶೈಲಿ, ಸ್ಥರ ಬದಲಾಗುತ್ತ ಹೋಗಿದೆ, ಸೌಕರ್ಯಗಳು ಜಾಸ್ತಿ ಆಗಿವೆ, ದುಡ್ಡಿಲ್ಲದೇ ಜೀವನವಿಲ್ಲ, ಅದು ಎಷ್ಟಾದರೂ ಸಾಕಾಗಲ್ಲ ಅನ್ನೊ ಹಾಗೆ ಆಗಿದೆ" ಅಂದೆ. "ಸಾಕು ಹೊಟ್ಟೆಗೇನು ದುಡ್ಡೆ ತಿನ್ನೊಕಾಗಲ್ಲ, ಏನಾದ್ರೂ ಹೊರಗೆ ತಿನ್ಕೊಂಡು ಬಂದ್ರಾಯ್ತು, ನಿಮ್ಮ ಸೊಡೆಕ್ಸೊ ಫುಡ ಕೂಪನ್ ಇವೆ ಅಲ್ವ" ಅಂದ್ಲು "ಅದೂ ದುಡ್ಡೇ ಕಣೇ, ಸಂಬಳದಲ್ಲಿ ಕಟ್ ಮಾಡಿ ಕೊಡೋದು ಅಂತಿದ್ದರೆ" ತಳ್ಳಿಕೊಂಡು ಹೊರ ನಡೆದಳು, "ಮಾತಾಡಲು ಬಿಟ್ಟರೆ ದುಡ್ಡು ಖರ್ಚು ಆಗಲ್ಲ ಅಂತ ಮಾತಾಲ್ಲೇ ಹೊಟ್ಟೆ ತುಂಬಿಸಿಬಿಡ್ತಾರೆ" ಅಂತನ್ನುತ್ತ.

**ದುಡ್ಡು, ಹಾಗೆ ನೋಡಿದ್ರೆ ಒಂದು ತುಣುಕು ಹಾಳೆ, ಚೂರು ಲೋಹ, ನಾವೇ ಅದಕ್ಕೆ ಬೆಲೆ, ಮೌಲ್ಯ ಅಂತ ಕೊಟ್ಟಿದ್ದು**, ನಮ್ಮ ಜೀವನದ ಅವಿಭಾಜ್ಯ ಅಂಗವಾಗಿದೆ ಈಗ. ಎಷ್ಟು ದುಡ್ಡಾದರೂ ಸಾಕಾಗಲ್ಲ, ಹಾಗೇ ಇನ್ನೂ ಹೆಚ್ಚು ಹೆಚ್ಚು ಅಂತ ಗಳಿಸುತ್ತಲೇ ಇರುತ್ತೇವೆ, ನಮ್ಮ ಅವಶ್ಯಕತೆಗಳು ಗಳಿಕೆಗೆ ತಕ್ಕಂತೆ ಬೆಳೆಯುತ್ತಲೇ ಹೋಗುತ್ತವೆ, ಬೆಳೆಸುತ್ತಲೂ ಹೋಗುತ್ತೇವೆ. ಕೊನೆಗೆ ಖುಷಿಯಾಗಿರೊಕೆ ದುಡ್ಡು ಅಂತ ಅನ್ನಿಸಿದಾಗ... ಅದಕ್ಕೆ ದುಡ್ಡೇ ಯಾಕೆ ಅನಿಸಿದರೂ, ದುಡ್ಡಿಲ್ಲದೆ ಖುಷಿಯೂ ಇಲ್ಲ ಅನಿಸುತ್ತದೆ, ದುಡ್ಡಿದ್ದರೆ ಖುಷಿಯೇ ಇರುತ್ತದೆ ಅಂತಲೂ ಇಲ್ಲ. ಅದ್ರೂ ದುಡ್ಡು ಬೇಕೇ ಬೇಕು, ಹಣ ಕಂಡ್ರೆ ಹೆಣನೂ ಬಾಯಿ ಬಿಡುತ್ತದೆ ಅಂತ ಸುಮ್ನೇನಾ ಹೇಳಿದ್ದು ಹೆಣಕ್ಕೂ ಜೀವ ಬರಬೇಕೆಂದ್ರೆ, ಜೀವಿಸೊಕೆ ಅದು ಬೇಕೇ ಅಲ್ವೇ.

ಹೊಟೆಲಿನಲ್ಲಿ ಹೊಟ್ಟೆ ತುಂಬ ತಿಂದು, ಫುಡ್ ಕೂಪನ್ನು ಕೊಟ್ಟಾಗ ದುಡ್ಡು ಕೊಟ್ಟಂತೆ ಅನ್ನಿಸಲಿಲ್ಲ, ಆದರೂ ಕೊಟ್ಟಿದ್ದೂ ದುಡ್ಡೇ. ವೇಟರಗೆ ಟಿಪ್ಸ ಅಂತ ಹತ್ತು ರೂಪಾಯಿ ಇಟ್ಟರೆ, ಇವಳು ತೆಗೆದುಕೊಂಡು ಐದು ರೂಪಾಯಿ ಇಡುತ್ತ, "ಏನು ಹೈದರಾಬಾದ ನಿಜಾಮನ ಮೊಮ್ಮಗನಾ ನೀವು, ಟಿಪ್ಸ ಎಷ್ಟು ಇರಬೇಕೊ ಅಷ್ಟೇ..." ಅಂದ್ಲು. ಅದನೆತ್ತಿಕೊಂಡ ವೇಟರ ಮುಖದಲ್ಲಿ ಹತ್ತುರೂಪಾಯಿ ಮೂಡಿಸಬಹುದಾಗಿದ್ದ ನಗುವೇ ಐದು ರೂಪಾಯಿಗೂ ಮೂಡಿತ್ತು, ಅಲ್ಲಿನ ಅವಶ್ಯಕತೆ ಅಷ್ಟೇ ಇತ್ತು ಅದನ್ನ ಇವಳು ಮನಗಾಣಿಸಿದ್ದಳು. ಹೊರಬರುತ್ತ, "ರೀ ಅಮೇರಿಕಾದಲ್ಲಿ ದೊಸೆಗೂ ಹತ್ತಿಪ್ಪತ್ತು ಡಾಲರ ಅಂತೇ, ಏನ ಕಾಸ್ಟ್ಲೀ ಅಲ್ವಾ" ಅಂತಿದ್ಲು, ಇನ್ನೇನು ಇಲ್ಲೀ ಥರ ಹದಿನೈದು ರೂಪಾಯಿಗೆ ದೋಸೆ ಅಲ್ಲಿ ಸಿಗೋಕಾಗುತ್ತಾ, "ಲೇ ಡಾಲರೂ ದುಡ್ಡೇ ಕಣೆ" ಅಂದೆ, ಹೊಟ್ಟೆ ತುಂಬಿದ್ದರೂ ಈಗ ನನ್ನೇ ತಿಂದು ಬಿಡುವ ಹಾಗೇ ನೋಡಿದ್ಲು, "ನಗೇ... ನಗೋಕೇನೂ ದುಡ್ಡು ಕೊಡಬೇಕಾಗಿಲ್ಲ" ಅಂದೆ ಇಬ್ಬರೂ ಪುಕ್ಕಟೆಯಾಗಿ ನಗುನಗುತ್ತ ಹೊರಟೆವು ನಮ್ಮ ನಂದನವನದ ಕಡೆಗೆ...

ಇಷ್ಟೊತ್ತು ಓದಿದ್ದು ಇಷ್ಟಾ ಆದ್ರೆ ಮೆಚ್ಚಿ, ಸಿಟ್ಟು ಬಂದಿದ್ರೆ ಚುಚ್ಚಿ ಇಂಚೆ (ಇ-ಅಂಚೆ) ಹಾಕಿ... ನನ್ನ ವಿಳಾಸ pm@telprabhu.com . ಹೀಗೆ ನೀವು ಓದಿ ಖುಶಿಯಾಗಿದ್ರೆ ನಿಮ್ಮ ಗೆಳೆಯರಿಗೂ ಇದನ್ನ ಕಳಿಸಿ, ಸಂತೋಷ ಇರೋದೇ ಹಂಚೋಕೆ ತಾನೆ...